**All India Radio: Bangalore**
**National Bulletin In Kannada**
**19.10.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.10.2025  19.35 p.m.**

**<><><><>**

ಮುಖ್ಯಾಂಶಗಳು

1. ಕರ್ನಾಟಕ, ಮಹಾರಾಷ್ಟ್ರ ವಿಪತ್ತು ಪರಿಹಾರಕ್ಕೆ ಕೇಂದ್ರದಿಂದ ೧ ಸಾವಿರದ ೯೫೦ ಕೋಟಿ ೮೦ ಲಕ್ಷ ರೂಪಾಯಿ ಬಿಡುಗಡೆ
2. ೪.೫ನೇ ತಲೆಮಾರಿನ ಯುದ್ಧ ವಿಮಾನ ಅಭಿವೃದ್ಧಿಪಡಿಸಿದ್ದಕ್ಕೆ ಹೆಚ್‌ಎಎಲ್ ಅನ್ನು ಶ್ಲಾಘಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
3. ಐಸಿಎಆರ್-ಎನ್‌ಬಿಎಐಆರ್ ರೈತರಿಗೆ ಬಲ ತುಂಬುವ ಕೆಲಸ ಮಾಡುತ್ತಿದೆ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
4. ಬಿಹಾರ ವಿಧಾನಸಭಾ ಚುನಾವಣೆ : ಅಂತಿಮ ಸುತ್ತಿನ ನಾಮಪತ್ರ ಸಲ್ಲಿಕೆಗೆ ನಾಳೆ ಕೊನೆಯ ದಿನ

<><><><>

ಕರ್ನಾಟಕ ಮತ್ತು ಮಹಾರಾಷ್ಟ್ರಗಳಿಗೆ ರಾಜ್ಯ ವಿಪತ್ತು ಪ್ರತಿಕ್ರಿಯಾ ನಿಧಿ-ಎಸ್‌ಡಿಆರ್‌ಎಫ್‌ನ ಕೇಂದ್ರದ ಪಾಲಿನ ಎರಡನೇ ಕಂತಾಗಿ ಒಂದು ಸಾವಿರದ ೯೫೦ ಕೋಟಿ ರೂಪಾಯಿಗಳನ್ನು ಮುಂಗಡವಾಗಿ ಬಿಡುಗಡೆ ಮಾಡಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅನುಮೋದನೆ ನೀಡಿದ್ದಾರೆ.  ಈ ವರ್ಷ ನೈಋತ್ಯ ಮುಂಗಾರು ಸಮಯದಲ್ಲಿ ಅತಿ ಹೆಚ್ಚು ಮಳೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ಜನರಿಗೆ ತಕ್ಷಣದ ಪರಿಹಾರ ನೆರವು ನೀಡಲು ಒಟ್ಟು ಮೊತ್ತದಲ್ಲಿ ಕರ್ನಾಟಕಕ್ಕೆ ೩೮೪ ಕೋಟಿ ರೂಪಾಯಿಗಳಿಗೂ ಹೆಚ್ಚು ಮತ್ತು ಮಹಾರಾಷ್ಟ್ರಕ್ಕೆ ಒಂದು ಸಾವಿರದ ೫೬೬ ಕೋಟಿ

ರೂಪಾಯಿಗಳನ್ನು ಅನುಮೋದಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಪ್ರವಾಹ, ಭೂಕುಸಿತ ಮತ್ತು ಮೇಘಸ್ಫೋಟದಿಂದ ಪೀಡಿತ ರಾಜ್ಯಗಳಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸಲು ಕೇಂದ್ರ ಸರ್ಕಾರವು ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಗೃಹ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಈ ವರ್ಷ, ಕೇಂದ್ರ ಸರ್ಕಾರವು ಈಗಾಗಲೇ ಎಸ್‌ಡಿಆರ್‌ಎಫ್ ಅಡಿಯಲ್ಲಿ ೨೭ ರಾಜ್ಯಗಳಿಗೆ ೧೩ ಸಾವಿರದ ೬೦೩ ಕೋಟಿ ರೂಪಾಯಿಗಳನ್ನು ಮತ್ತು ಎನ್‌ಡಿಆರ್‌ಎಫ್ ಅಡಿಯಲ್ಲಿ ೨ ಸಾವಿರದ ೧೮೯ ಕೋಟಿ ರೂಪಾಯಿಗಳನ್ನು ೧೫ ರಾಜ್ಯಗಳಿಗೆ ಬಿಡುಗಡೆ ಮಾಡಿದೆ ಎಂದು ಸಚಿವಾಲಯ ತಿಳಿಸಿದೆ. ಇದಲ್ಲದೆ, ೨೧ ರಾಜ್ಯಗಳಿಗೆ ಕೇಂದ್ರ ವಿಪತ್ತು ನಿರ್ವಹಣಾ ನಿಧಿಯಿಂದ ೪ ಸಾವಿರದ ೫೭೧ ಕೋಟಿ ರೂಪಾಯಿಗಳನ್ನು ಮತ್ತು ಒಂಬತ್ತು ರಾಜ್ಯಗಳಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ ೩೭೨ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಕೇಂದ್ರ ಸರ್ಕಾರವು ಎಲ್ಲಾ ಲಾಜಿಸ್ಟಿಕ್ ಸಹಾಯವನ್ನು ಒದಗಿಸಿದೆ. ಇದರಲ್ಲಿ ಪ್ರವಾಹ, ಭೂಕುಸಿತ, ಮೇಘಸ್ಫೋಟ ಪೀಡಿತ ರಾಜ್ಯಗಳಿಗೆ ಅಗತ್ಯವಿರುವ ಎನ್‌ಡಿಆರ್‌ಎಫ್ ತಂಡಗಳು, ಸೇನಾ ತಂಡಗಳು ಮತ್ತು ವಾಯುಪಡೆಯ ಬೆಂಬಲವೂ ಸೇರಿದೆ. ಈ ವರ್ಷದ ಮುಂಗಾರಿನಲ್ಲಿ, ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳಿಗಾಗಿ ೩೦ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಗರಿಷ್ಠ ೧೯೯ ಎನ್‌ಡಿಆರ್‌ಎಫ್ ತಂಡಗಳನ್ನು ನಿಯೋಜಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ನಾಸಿಕ್ ಘಟಕದಲ್ಲಿ ೪.೫ ತಲೆಮಾರಿನ ಯುದ್ಧ ವಿಮಾನವನ್ನು ಅಭಿವೃದ್ಧಿಪಡಿಸಿದ್ದಕ್ಕಾಗಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನ ಗಮನಾರ್ಹ

ಕಾರ್ಯವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಇಂದು ಲಖನೌದಲ್ಲಿ ಸಮುದಾಯ ಭವನ ಉದ್ಘಾಟಿಸಿ ಮಾತನಾಡಿದ ಅವರು, ಎರಡು ದಿನಗಳ ಹಿಂದೆ ನಾಸಿಕ್‌ನಲ್ಲಿ ಹೊಸ ಜೆಟ್ ಅನಾವರಣದಲ್ಲಿ ಭಾಗವಹಿಸಿದ ನಂತರ ಉತ್ತರ ಪ್ರದೇಶದ ರಾಜಧಾನಿಗೆ ಆಗಮಿಸಿರುವುದಾಗಿ ಹೇಳಿದರು. ಹೆಚ್‌ಎಎಲ್ ಗಮನಾರ್ಹ ಕೆಲಸ ಮಾಡುತ್ತಿದೆ. ಸಂಶೋಧನೆಯನ್ನು ಉತ್ತೇಜಿಸಲು ಲಕ್ನೋದಲ್ಲಿ ಡಿಆರ್‌ಡಿಒದ ಹೊಸ ಪ್ರಯೋಗಾಲಯ ಸ್ಥಾಪಿಸಲಾಗಿದೆ ಎಂದು ಹೇಳಿದರು. ಆಪರೇಷನ್ ಸಿಂಧೂರ್ ಸಮಯದಲ್ಲಿ ಪ್ರದರ್ಶಿಸಲಾದ ಬ್ರಹ್ಮೋಸ್‌ನ ಫೈರ್‌ಪವರ್ ಅನ್ನು ನೆನಪಿಸಿಕೊಂಡ ಅವರು, ಈ ಕ್ಷಿಪಣಿಗಳನ್ನು ಈಗ ಲಖನೌದಲ್ಲಿ ಉತ್ಪಾದಿಸಲಾಗುತ್ತಿದೆ ಎಂದು ತಿಳಿಸಿದರು.

<><><><>

ಕೀಟನಾಶಕಗಳಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತದೆ. ಆದ್ದರಿಂದ ರೈತರು ಸಹಜ ಕೃಷಿಗೆ ಒತ್ತು ನೀಡಬೇಕು. ಐಸಿಎಆರ್-ಎನ್‌ಬಿಎಐಆರ್ ರೈತರಿಗೆ ಬಲ ತುಂಬುವ ಕೆಲಸ ಮಾಡುತ್ತಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಮೂರನೇ ಕೃಷಿ ಕೀಟ ಜೈವಿಕ ನಿಯಂತ್ರಣ ಪ್ರದರ್ಶನ ಮತ್ತು ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಬ್ಯೂರೋ - ಬೆಂಗಳೂರಿನ ೩೩ನೇ ಸಂಸ್ಥಾಪನಾ ದಿನಾಚರಣೆಗೆ ಇಂದು ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ವಿಶ್ವದ ಐದು ಆರ್ಥಿಕ ಶಕ್ತಿಗಳಲ್ಲಿ ಒಂದಾಗಿದ್ದು, ಶೀಘ್ರ ಮೂರನೇ ಆರ್ಥಿಕ ಶಕ್ತಿಶಾಲಿ ದೇಶವಾಗಲಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ನಮ್ಮ ಹಿಂದಿನ ಪೀಳಿಗೆಯ ಕೃಷಿಕರು ರೈತಮಿತ್ರ ಕೀಟಗಳ ಬಗ್ಗೆ ಹೆಚ್ಚು ಮಾಹಿತಿ

ಹೊಂದಿದ್ದರು. ಇಂದಿನ ರೈತರಿಗೂ ಸಹ ಇವುಗಳ ಕುರಿತು ಮಾಹಿತಿ ನೀಡುವ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ರೈತರು, ಸಂಶೋಧಕರು ಮತ್ತು ವಿಜ್ಞಾನಿಗಳನ್ನು ಸಾವಯವ ಕೃಷಿಯ ಅರಿವು ಮೂಡಿಸಲಾಗುತ್ತಿದೆ. ಅಷ್ಟೇ ಅಲ್ಲದೇ ನೈಸರ್ಗಿಕ ಕೃಷಿ ಅಳವಡಿಸಿಕೊಳ್ಳುವ ರೈತರಿಗೆ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಸದ ಡಾ. ಸಿ.ಎನ್. ಮಂಜುನಾಥ್ ಮಾತನಾಡಿ, ಮನುಷ್ಯನ ಅರೋಗ್ಯ ನಮ್ಮ ಬೆಳೆಗಳ ಮೇಲೆ ಮತ್ತು ಮಣ್ಣಿನ ಫಲವತ್ತತೆ ಮನುಷ್ಯನ ಆರೋಗ್ಯದ ಮೇಲೆ ಅವಲಂಬಿತವಾಗಿದೆ. ಜೈವಿಕ ಪದ್ಧತಿಯನ್ನು ನಾವು ಹೆಚ್ಚು ಬಳಸುವ ಅಗತ್ಯವಿದೆ. ಸಾವಯವ ಪದ್ಧತಿ ಅಳವಡಿಸಿಕೊಂಡಾಗ ಹೆಚ್ಚಿನ ರೋಗಗಳನ್ನು ತಡೆಯಬಹುದು ಎಂದರು. ಕಾರ್ಯಕ್ರಮದಲ್ಲಿ ಉತ್ತಮ ಸಾಧನೆ ಮಾಡಿದ ಕೃಷಿಕರು ಹಾಗೂ ಐಸಿಎಆರ್-ಎನ್‌ಬಿಎಐಆರ್ ನ ವಿಜ್ಞಾನಿಗಳನ್ನು ಗೌರವಿಸಲಾಯಿತು.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಸುತ್ತಿನ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಾಳೆ ಮುಕ್ತಾಯಗೊಳ್ಳಲಿದೆ. ಈ ಹಂತದ ಮತದಾನ ನವೆಂಬರ್ ೧೧ ರಂದು ರಾಜ್ಯದ ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆಯಲಿದೆ. ಅಭ್ಯರ್ಥಿಗಳು ಇದೇ ೨೩ ರವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಮೊದಲ ಹಂತಕ್ಕೆ ನಾಮಪತ್ರಗಳನ್ನು ಹಿಂಪಡೆಯಲು ನಾಳೆ ಕೊನೆಯ ದಿನವಾಗಿದೆ. ಈ ಸುತ್ತಿನಲ್ಲಿ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಈಗಾಗಲೇ ಭಾರತೀಯ ಜನತಾ ಪಕ್ಷ ಮತ್ತು ಜನತಾದಳ-ಯುನೈಟೆಡ್, ಚುನಾವಣಾ

ಪ್ರಚಾರಕ್ಕಾಗಿ ತಮ್ಮ ಸ್ಟಾರ್ ಪ್ರಚಾರಕರನ್ನು ನಿಯೋಜಿಸಿವೆ. ದೀಪಾವಳಿಯ ನಂತರ ಪ್ರಚಾರ ಇನ್ನಷ್ಟು ತೀವ್ರಗೊಳ್ಳುವ ನಿರೀಕ್ಷೆಯಿದೆ.

<><><>

ದೀಪಾವಳಿಯ ಮುನ್ನಾದಿನವಾದ ಇಂದು ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಭವ್ಯ ದೀಪೋತ್ಸವವನ್ನು ಆಯೋಜಿಸಲಾಗಿದೆ. ರಾಮ್ ಕಿ ಪೈಡಿ ಸೇರಿದಂತೆ ಅಯೋಧ್ಯೆಯ ೫೮ ಘಾಟ್‌ಗಳಲ್ಲಿ ಇಂದು ೨೮ ಲಕ್ಷಕ್ಕೂ ಹೆಚ್ಚು ದೀಪಗಳನ್ನು ಬೆಳಗಿಸುವ ಮೂಲಕ ಉತ್ತರಪ್ರದೇಶ ಸರ್ಕಾರ ಗಿನ್ನೆಸ್ ವಿಶ್ವ ದಾಖಲೆಯ ಗುರಿಯನ್ನು ಹೊಂದಿದೆ. ಈ ವರ್ಷ ಮತ್ತೊಂದು ವಿಶ್ವ ದಾಖಲೆಯ ಪ್ರಯತ್ನದಲ್ಲಿ ೨ ಸಾವಿರದ ೧೦೦ ವೇದಾಚಾರ್ಯರು ಸರಯೂ ನದಿಯ ದಡದಲ್ಲಿ ಮಹಾ ಆರತಿ ಮತ್ತು ಶ್ಲೋಕಗಳನ್ನು ಪಠಿಸಲಿದ್ದಾರೆ. ರಾಜ್ಯಪಾಲರಾದ ಆನಂದಿಬೆನ್ ಪಟೇಲ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಇತರ ಹಲವಾರು ಸಚಿವರು ಈ ಕಾರ್ಯಕ್ರಮಕ್ಕೆ ಹಾಜರಾಗಲಿದ್ದಾರೆ ಎಂದು ವರದಿ ತಿಳಿಸಿದೆ.

<><><>

ಕದನ ವಿರಾಮ ಉಲ್ಲಂಘನೆಗಳ ಬಗ್ಗೆ ಇಸ್ರೇಲ್ ಮತ್ತು ಪ್ಯಾಲೆಸ್ತೀನ್ ನಡುವೆ ಆರೋಪಗಳು ಕೇಳಿ ಬರುತ್ತಿರುವುದರಿಂದ ಗಾಜಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿದೆ. ಗಾಯಗೊಂಡ ಗಾಜಾ ನಿವಾಸಿಗಳು ಮತ್ತು ಈಜಿಪ್ಟ್ ಪಾಸ್‌ಪೋರ್ಟ್ ಹೊಂದಿರುವವರಿಗಾಗಿ ಕ್ರಾಸಿಂಗ್ ಅನ್ನು ನಾಳೆ ಮತ್ತೆ ತೆರೆಯಲಾಗುವುದು ಎಂಬ ಪ್ಯಾಲೆಸ್ತೀನ್ ರಾಯಭಾರ ಕಚೇರಿಯ ಹೇಳಿಕೆಗೆ ವಿರುದ್ಧವಾಗಿ, ಮುಂದಿನ ಸೂಚನೆ ಬರುವವರೆಗೂ ರಫಾ ಮುಚ್ಚಲ್ಪಡುತ್ತದೆ ಎಂದು ಇಸ್ರೇಲ್ ಪ್ರಧಾನಿ ನೆತನ್ಯಾಹು ಅವರ ಕಚೇರಿ ಹೇಳಿದ ನಂತರ ವಿವಾದ ಉಲ್ಬಣಗೊಂಡಿತು.

<><><>

ಆಸ್ಟ್ರೇಲಿಯಾದ ಪರ್ತ್‌ನಲ್ಲಿ ಭಾರತದ ವಿರುದ್ಧ ನಡೆದ ಮೊದಲ ಏಕದಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ೭ ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ. ಮಳೆ ಹಿನ್ನೆಲೆಯಲ್ಲಿ ಡಕ್‌ವರ್ತ್ ಲೂಯಿಸ್ ನಿಯಮದ ಪ್ರಕಾರ ಭಾರತ ೨೬ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೩೬ ರನ್‌ಗಳಿಸಲಷ್ಟೇ ಶಕ್ತವಾಗಿತ್ತು. ಈ ಗುರಿ ಬೆನ್ನತ್ತಿದ್ದ ಆಸ್ಟ್ರೇಲಿಯಾ ೩ ವಿಕೆಟ್ ನಷ್ಟಕ್ಕೆ ೧೩೧ ರನ್‌ಗಳಿಸಿ ಗೆಲುವು ಸಾಧಿಸಿದೆ. ಈ ಮೂಲಕ ಸರಣಿಯಲ್ಲಿ ಆಸ್ಟ್ರೇಲಿಯಾ ೧-೦ ಅಂತರದಿಂದ ಮುನ್ನಡೆ ಗಳಿಸಿದೆ. ರೋಹಿತ್ ಶರ್ಮಾ ೮ ರನ್ ಹಾಗೂ ವಿರಾಟ್ ಕೊಹ್ಲಿ ಶೂನ್ಯಕ್ಕೆ ಔಟ್ ಆಗಿ ನಿರಾಸೆ ಮೂಡಿಸಿದ್ದಾರೆ. ಸರಣಿಯ ಎರಡನೇ ಪಂದ್ಯ ಇದೇ ೨೩ರಂದು ಅಡಿಲೇಡ್ ನಲ್ಲಿ ನಡೆಯಲಿದೆ.  ಮೂರನೇ ಹಾಗೂ ಕಡೆಯ ಏಕದಿನ ಪಂದ್ಯ ಅಕ್ಟೋಬರ್ ೨೫ರಂದು ಸಿಡ್ನಿಯಲ್ಲಿ ನಡೆಯಲಿದೆ.

<><><><>

ಬ್ಯಾಡ್ಮಿಂಟನ್‌ನಲ್ಲಿ, ಭಾರತೀಯ ಶಟ್ಲರ್ ತನ್ವಿ ಶರ್ಮಾ ಇಂದು ಜೂನಿಯರ್ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಬಾಲಕಿಯರ ಸಿಂಗಲ್ಸ್ ಫೈನಲ್‌ನಲ್ಲಿ ಥೈಲ್ಯಾಂಡ್‌ನ ಎರಡನೇ ಶ್ರೇಯಾಂಕದ ಅನ್ಯಾಪತ್ ಫಿಚಿತ್‌ಪ್ರೀಚಾಸಕ್ ವಿರುದ್ಧ ೭-೧೫, ೧೨-೧೫ ಅಂತರದಲ್ಲಿ ಸೋತ ನಂತರ ರನ್ನರ್ ಅಪ್ ಸ್ಥಾನ ಪಡೆದರು. ನಿನ್ನೆ ನಡೆದ ಸೆಮಿಫೈನಲ್‌ನಲ್ಲಿ ತನ್ವಿ ಚೀನಾದ ಲಿಯು ಸಿ ಯಾ ವಿರುದ್ಧ ೧೫-೧೧, ೧೫-೯ ಅಂತರದಲ್ಲಿ ಜಯಗಳಿಸಿ ಫೈನಲ್ ತಲುಪಿದ್ದರು.

<><><><>

ಆಸ್ಟಿಯೊಪೊರೋಸಿಸ್ ತಡೆಗಟ್ಟಲು ಆಯುರ್ವೇದದ ತಡೆಗಟ್ಟುವ ಕ್ರಮಗಳು, ಸಮತೋಲಿತ ಪೋಷಣೆ ಮತ್ತು ಸೌಮ್ಯ ದೈಹಿಕ ಚಟುವಟಿಕೆಯನ್ನು ಅಳವಡಿಸಿಕೊಳ್ಳುವಂತೆ ಆಯುಷ್ ಸಚಿವಾಲಯ ನಾಗರಿಕರನ್ನು, ವಿಶೇಷವಾಗಿ ವೃದ್ಧರನ್ನು ಮತ್ತು ಋತುಬಂಧದ ನಂತರದ ಮಹಿಳೆಯರನ್ನು ಒತ್ತಾಯಿಸಿದೆ. ನಾಳೆ ಆಚರಿಸಲಾಗುವ ವಿಶ್ವ ಆಸ್ಟಿಯೊಪೊರೋಸಿಸ್ ದಿನದ ಮುನ್ನಾದಿನವಾದ ಇಂದು

ಸಚಿವಾಲಯ ತನ್ನ ಹೇಳಿಕೆಯಲ್ಲಿ, ಈ ಸಮಗ್ರ ಅಭ್ಯಾಸಗಳನ್ನು ದೈನಂದಿನ ಜೀವನದಲ್ಲಿ ಸಂಯೋಜಿಸುವ ಮೂಲಕ, ವ್ಯಕ್ತಿಗಳು ತಮ್ಮ ಮೂಳೆಗಳನ್ನು ಬಲಪಡಿಸಬಹುದು ಮತ್ತು ಮುರಿತದ ಅಪಾಯವನ್ನು ಕಡಿಮೆ ಮಾಡಬಹುದು ಎಂದು ಹೇಳಿದೆ. ಈ ವರ್ಷದ ಆಚರಣೆಯು ಮೂಳೆ ಆರೋಗ್ಯ ಮತ್ತು ಆಸ್ಟಿಯೊಪೊರೋಸಿಸ್‌ಗೆ ಆಯುರ್ವೇದ ಪರಿಹಾರಗಳ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ ಎಂದು ಸಚಿವಾಲಯ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>